**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ.** 2459/2025

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ಈರೇಶ್ | ಸಿ.ಡಬ್ಲ್ಯೂ–12 |
| ತಂದೆಯ ಹೆಸರು | : | ಲಿಂಗಪ್ಪ | ಪಿ.ಡಬ್ಲ್ಯೂ–07 |
| ವಯಸ್ಸು | : | 30 ವರ್ಷ | |
| ಉದ್ಯೋಗ | : | ಪಿ ಎಸ್ ಐ | |
| ವಾಸಸ್ಥಳ | : | ಚಳ್ಳಕೆರೆ | ದಿಃ 18-02-2026. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ದಿನಾಂಕ 17.06.2025 ರಿಂದ ಇಲ್ಲಿಯವರೆಗೆ ನಾನು ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ಪಿ ಎಸ್ ಐ . ಅಂತ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 05.10.2025 ರಂದು ಚಾಸಾ-11 ರವರಿಂದ ಈ ಪ್ರಕರಣದ ಕಡತವನ್ನು ಹೆಚ್ಚಿನ ತನಿಖೆಗಾಗಿ ಪಡೆದುಕೊಂಡಿರುತ್ತೇನೆ.

ದಿನಾಂಕ 05.10.2025 ರಂದು ಠಾಣಾ ಮೊಕದ್ದಮೆ ಸಂಖ್ಯೆ 377/2025 ರಲ್ಲಿ ಆರೋಪಿಯು ನೀಡಿದ ಸ್ವ-ಇಚ್ಛಾ ಹೇಳಿಕೆಯ ಮೇರೆಗೆ ಈ ಪ್ರಕರಣದಲ್ಲಿ ಕೆಎ-16 ಇಎ-5480 ಬೈಕನ್ನು ಕಳ್ಳತನ ಮಾಡಿರುವುದಾಗಿ ಆರೋಪಿ ಒಪ್ಪಿಕೊಂಡಿರುತ್ತಾರೆ. ಅದೇ ದಿನ ಚಾಸಾ-4 ಮತ್ತು 5 ರವರ ಸಮಕ್ಷಮ ಆರೋಪಿಯು ತೋರಿಸಿದ ಸ್ಥಳದಲ್ಲಿ ಮದ್ಯಾಹ್ನ 03-45 ರಿಂದ 04-10 ರವರೆಗೆ ಮಹಜರ್ ಕ್ರಮ ಜರುಗಿಸಿರುತ್ತೇನೆ.

. ಸಾಕ್ಷಿಗೆ ನಿಪಿ.5 ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿಃ 5(ಸಿ) ಅಂತ ಗುರುತಿಸಲಾಯಿತು.

ದಿನಾಂಕ 07.10.2025 ರಂದು ಆರೋಪಿಯಿಂದ ಕಳ್ಳತನ ಮಾಡಿದ ಬೈಕನ್ನು ಖರೀದಿಸಿದ್ದ ಚಾಸಾ-6 ರವರಿಗೆ ಬೈಕನ್ನು ಹಾಜರು ಪಡಿಸಲು ನೋಟೀಸ್ ನೀಡಿರುತ್ತೇನೆ. ಚಾಸಾ-6 ರವರು ಅದೇ ದಿನ ಹಾಜರು ಪಡಿಸಿದ ಕೆಎ-16 ಇಎ-5480 ಬೈಕನ್ನು ಆರೋಪಿತನ ಹಾಗೂ ಚಾಸಾ-4 ಮತ್ತು 5 ರವರ ಸಮಕ್ಷಮದಲ್ಲಿ ಮದ್ಯಾಹ್ನ 03-00 ರಿಂದ 03-20 ರವರೆಗೆ ಪಂಚನಾಮೆ ಕ್ರಮ ಜರುಗಿಸಿ ಅಮಾನತ್ತು ಪಡಿಸಿಕೊಂಡಿರುತ್ತೇನೆ.

ಸಾಕ್ಷಿಗೆ ನಿಪಿ.6 ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿಃ 6(ಸಿ) ಅಂತ ಗುರುತಿಸಲಾಯಿತು.

ಪಂಚನಾಮೆ ಸಮಯದಲ್ಲಿ ಚಾಸಾ-10 ರವರು ಭಾವಚಿತ್ರವನ್ನು ತೆಗೆದಿರುತ್ತಾರೆ. ಚಾಸಾ-7 ರವರು ನಾನು ನೀಡಿದ ಉಕ್ತಲೇಖನದಂತೆ ಲ್ಯಾಪ್ ಟಾಪ್ ನಲ್ಲಿ ಟೈಪ್ ಮಾಡಿರುತ್ತಾರೆ.

ಸಾಕ್ಷಿಯು ನಿಪಿ.4 ರ ಭಾವಚಿತ್ರವನ್ನು ಮಹಜರ್ ಸಮಯಲಾಗಿರುತ್ತದೆ ಎಂದು ನೋಡಿ ಗುರುತಿಸಿರುತ್ತಾರೆ.

ಅದೇ ದಿನ ಚಾಸಾ-6 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ಅದೇ ದಿನ ಚಾಸಾ-1 ರವರ ಮುಂದುವರೆದ ಹೇಳಿಕೆಯನ್ನು ಪಡೆದಿರುತ್ತೇನೆ. ದಿನಾಂಕ 05.10.2025 ರಂದು ಚಾಸಾ-8 ಮತ್ತು 9 ರವರ ಹೇಳಿಕೆಗಳನ್ನು ಪಡೆದಿರುತ್ತೇನೆ.

ಮಹಜರ್ ಸಮಯದಲ್ಲಿ ತೆಗೆದ ಭಾವಚಿತ್ರಕ್ಕೆ ಸಂಬಂಧಿಸಿದದಂತೆ ಚಾಸಾ-10 ರವರಿಂದ ಸಾಕ್ಷ್ಯ ಅಧಿನಿಯಮದಂತೆ ಪ್ರಮಾಣ ಪತ್ರವನ್ನು ಪಡೆದಿರುತ್ತೇನೆ.

ಸಾಕ್ಷಿಗೆ ಪ್ರಮಾಣ ಪತ್ರವನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಪ್ರಮಾಣ ಪತ್ರವನ್ನು ನಿಪಿಃ8 ಅಂತ, ಸಾಕ್ಷಿಯ ಸಹಿಯನ್ನು ನಿಪಿಃ 8(ಎ) ಅಂತ ಗುರುತಿಸಲಾಯಿತು. ಸಿಡಿಯನ್ನು ನಿಪಿ.9 ಅಂತ ಗುರುತಿಸಲಾಯಿತು.

ದಿನಾಂಕ 04.12.2025 ರಂದು ಆರೋಪಿಯ ವಿರುದ್ಧ ಅಪರಾಧ ದೃಢಪಟ್ಟ ಮೇರೆಗೆ ಘನ ನ್ಯಾಯಾಲಯಕ್ಕೆ ದೋಷರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲುಃ ಶ್ರೀಮತಿ ಬಿ.ಜಿ., ಆರೋಪಿ ಪರ ವಕೀಲರಿಂದಃ</u>**

ಆರೋಪಿಯ ಪತ್ತೆಗಾಗಿ ಚಾಸಾ-8 ಮತ್ತು 9 ರವರನ್ನು ನೇಮಕ ಮಾಡಿದ್ದೆ. ಚಾಸಾ-1 ರವರು ಸ್ನೇಹಿತರು ಮತ್ತು ಸಂಬಂಧಿಕರೊಂದಿಗೆ ಚರ್ಚಿಸಿ ದೂರು ತಡವಾಗಿ ನೀಡಿರುತ್ತೇನೆ ಎಂದು ಹೇಳಿದ್ದು, ಸದರಿ ವ್ಯಕ್ತಿಗಳನ್ನು ಈ ಪ್ರಕರಣದಲಿ ಸಾಕ್ಷಿದಾರರನ್ನಾಗಿ ಸೇರಿಸಿರುವುದಿಲ್ಲ. ಸದರಿ ವ್ಯಕ್ತಿಗಳನ್ನು ಸಾಕ್ಷಿಗಳಾಗಿ ಸೇರಿಸಲು ನನಗೆ ಯಾವುದೇ ತೊಂದರೆ ಇರಲಿಲ್ಲ ಎಂರೆ ಸಾಕ್ಷಿಯು ಸದರಿಯವರ ಸಂಪೂರ್ಣ ವಿಳಾಸ ನನಗೆ ತಿಳಿದಿರಲಿಲ್ಲ ಎಂದು ನುಡಿಯುತ್ತಾರೆ

ದಿನಾಂಕ 04.10.2025 ರಂದು ಆರೋಪಿಯ ವಿರುದ್ಧ ದಾಖಲಾದ ಎರಡು ಪ್ರಕರಣದ ಬಗ್ಗೆ ನನಗೆ ಮಾಹಿತಿ ಇರುತ್ತದೆ. ದೂರು ದಾಖಲಿಸಿದ ದಿನದಂದೇ ಆರೋಪಿಯ ಪತ್ತೆಗಾಗಿ ನೇಮಿಸಿರುತ್ತೇನೆ ಎಂದರೆ ಸರಿ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರತ್ಯೇಕ ತನಿಖೆ ಕೈಗೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯ ಸ್ವ–ಇಚ್ಛಾ ಹೇಳಿಕೆಯಲ್ಲಿರುವ ಕ್ರಮ ಸಂಖ್ಯೆ 12 ಮತ್ತು 13 ವಾಹನಗಳು ಒಂದೇ ಆಗಿರುತ್ತದೆ ಎಂದರೆ ಸಾಕ್ಷಿಯು ಆರೋಪಿಯು ಒಂದೇ ವ್ಯಕ್ತಿಗೆ ಎರಡು ಬೈಕ್ ಗಳನ್ನು ನೀಡಲಾಗಿರುತ್ತದೆ ಎಂದು ನುಡಿಯುತ್ತಾರೆ.

ದಿನಾಂಕ 07.10.2025 ರಂದು ತನಿಖೆ ಪೂರ್ಣಗೊಂಡಿದ್ದರೂ ಎರಡು ತಿಂಗಳು ತಡವಾಗಿ ದೋಷರೋಪಣ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ 60 ದಿನಗಳ ಕಾಲಾವಕಾಶ ಇರುವ ಕಾರಣ ದೋಷರೋಪಣ ಪಟ್ಟಿಯನ್ನು ಸದರಿ ಸಮಯದಲ್ಲಿ ಸಲ್ಲಿಸಿರುತ್ತೇನೆ ಎಂದು ನುಡಿಯುತ್ತಾರೆ. ಚಾಸಾ–6 ರವರು ನಮ್ಮ ಠಾಣೆಯ ಖಾಯಂ ಜಪ್ತುದಾರರಾಗಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ–10 ಮತ್ತು 11 ರವರು ನಮ್ಮ ಠಾಣಾ ಸಿಬ್ಬಂದಿಗಳು ಎಂದರೆ ಸರಿ. ಆರೋಪಿಯು ಯಾವುದೇ ತಪ್ಪು ಮಾಡದೇ ಇದ್ದರೂ ಸುಳ್ಳು ದೋಷರೋಪಣ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ